ಇದು ಬರಪೀಡಿತ ಜಿಲ್ಲೆಯಾಗಿದ್ದು, ವಲಸೆಯಿಂದಾಗಿ ಮೂಲಭೂತ, ಸೌಕರ್ಯಗಳನ್ನು ಪೂರೈಸಿಕೊಳ್ಳಲು ಜನರ ತಮ್ಮ ಹೆಚ್ಚಿನ ಆದ್ಯತೆ ನೀಡುವುದರಿಂದ ತಮ್ಮ ಮಕ್ಕಳಿಗೆ ಶೈಕ್ಷಣಿಕ ಹಿತದೃಷ್ಟಿಯಿಂದ ಕಡಿಮೆಯಾಗಿರುವುದರಿಂದ ಫಲಿತಾಂಶ ಕಡಿಮೆಯಾಗಲು ಕಾರಣವಾಗಿರುತ್ತದೆ.

ಇ) ಫಲಿತಾಂಶ ಕುಸಿಯಲು ಕಾರಣರಾದವರ ಮೇಲೆ ನಿಯಮಾನುಸಾರ ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದೆ.

ಈ) ಇಲ್ಲ.

ಆರ್.ಟಿ.ಇ. ಯೋಜನೆಯಡಿ ವ್ಯಾಸಂಗ ಮಾಡುತ್ತಿರುವ ಮಕ್ಕಳಿಗೆ ಸೌಲಭ್ಯಗಳು

579(1233), ಶ್ರೀ ಬಾಲಕೃಷ್ಣ ಸಿ.ಎನ್. (ಶ್ರವಣಬೆಳಗೊಳ)

ಅ) ರಾಜ್ಯದಲ್ಲಿ ಕಡ್ಡಾಯ ಶಿಕ್ಷಣ ಹಕ್ಕು ಕಾಯಿದೆ–(ಆರ್.ಟಿ.ಇ.) ಯೋಜನೆಯಡಿ ಖಾಸಗಿ ಹಾಗೂ ಅನುದಾನಿತ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮಕ್ಕಳಿಗೆ ಪ್ರಸ್ತುತ ಸರ್ಕಾರದಿಂದ ದೊರೆಯುತ್ತಿರುವ ಸೌಲಭ್ಯಗಳೇನು;

ಆ) ಈ ಮಕ್ಕಳಿಗೆ ಪಠ್ಯಪುಸ್ತಕ ಹಾಗೂ ಇನ್ನಿತರೆ ಸೌಲಭ್ಯಗಳನ್ನು ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಇ) ಆಗಿದ್ದಲ್ಲಿ ಅತ್ಯಂತ ಹಿಂದುಳಿದ ವರ್ಗದ ಕುಟುಂಬದ ಮಕ್ಕಳಿಗೆ ಉಚಿತ ಶಿಕ್ಷಣ ಸೌಲಭ್ಯ ನೀಡಿರುವ ಜೊತೆಗೆ ಸರ್ಕಾರ ಪಠ್ಯಪುಸ್ತಕ ಮತ್ತು ಸಮವಸ್ತ್ರ ನೀಡಲು ಕ್ರಮ ಕೈಗೊಳ್ಳುವುದೇ?

ಶ್ರೀ ಕಿಮ್ಮನೆ ರತ್ನಾಕರ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ರಾಜ್ಯ ಸಚಿವರು)

ಅ) ರಾಜ್ಯದಲ್ಲಿ ಅನುದಾನಿತ ಶಾಲೆಗಳಲ್ಲಿ ಕೆಳಕಾಣಿಸಿದ ಸೌಲಭ್ಯಗಳನ್ನು ಒದಗಿಸಲಾಗುತ್ತಿದ್ದು. ಸದರಿ ಶಾಲೆಗಳಲ್ಲಿ ಶಿಕ್ಷಣ ಹಕ್ಕು ಕಾಯಿದೆಯಡಿ ಪ್ರವೇಶ ಪಡೆದ ಮಕ್ಕಳಿಗೂ ಸಹ ಸದರಿ ಸೌಲಭ್ಯ ದೊರಕುತ್ತಿದೆ.

1. ಪಠ್ಯಪುಸ್ತಕ
2. ಉಚಿತ ಬೈಸಿಕಲ್
3. ಅಕ್ಷರ ದಾಸೋಹ
4. ಹಾಗೂ ಇನ್ನಿತರೆ ಸೌಲಭ್ಯಗಳು

ಅನುದಾನರಹಿತ ಶಾಲೆಗಳಲ್ಲಿ ಪ್ರಾರಂಭಿಕ ತರಗತಿಯಲ್ಲಿ ಶಿಕ್ಷಣ ಹಕ್ಕು ಕಾಯಿದೆ ಸೆಕ್ಷನ್ 12(1) (ಸಿ) ಶೇ.25ರ ಪ್ರಮಾಣದಲ್ಲಿ ನೆರೆಹೊರೆಯಲ್ಲಿ ವಾಸಿಸುವ ಅನಾನುಕೂಲ ಪರಿಸ್ಥಿತಿಯಲ್ಲಿರುವ ಮತ್ತು ದುರ್ಬಲ ವರ್ಗದ ಮಕ್ಕಳಿಗೆ ಉಚಿತ ಪ್ರವೇಶ ನೀಡಲಾಗುತ್ತಿದೆ.

ಆ) ಆರ್.ಟಿ.ಇ. ಅಡಿಯಲ್ಲಿ **ಅನುದಾನಿತ ಶಾಲೆಗಳಲ್ಲಿ ಪ್ರವೇಶ ಪಡೆದು ವ್ಯಾಸಂಗ ಮಾಡುತ್ತಿರುವ ಮಕ್ಕಳಿಗೆ** ಉಚಿತ ಪಠ್ಯ ಪುಸ್ತಕಗಳ ಸೌಲಭ್ಯ ನೀಡಲಾಗುತ್ತದೆ. ಆದರೆ ಅನುದಾನ ರಹಿತ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವವರಿಗೆ ಈ ಸೌಲಭ್ಯವಿರುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಚನ್ನರಾಯಪಟ್ಟಣದಲ್ಲಿ ಬಯಲು ರಂಗಮಂದಿರ

580(1234), ಶ್ರೀ ಬಾಲಕೃಷ್ಣ ಸಿ.ಎನ್. (ಶ್ರವಣಬೆಳಗೊಳ)

ಅ) ಚನ್ನರಾಯಪಟ್ಟಣದಲ್ಲಿ ಬಯಲು ರಂಗಮಂದಿರ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಚನ್ನರಾಯಪಟ್ಟಣದಲ್ಲಿ ಬಯಲು ರಂಗಮಂದಿರ ನಿರ್ಮಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ;

ಇ) ಹೊಸ ಬಯಲು ರಂಗಮಂದಿರ ನಿರ್ಮಾಣ ಮಾಡಲು ಸರ್ಕಾರ ಸ್ಥಳ ಗುರುತಿಸಿದೆಯೇ;